# ಕನ್ನಡ ನಾಡು ನುಡಿ ಸಂಸ್ಕೃತಿ

ವಿದ್ಯಾರ್ಥಿಯ ಹೆಸರು : ನಿಖಿತ ಎನ್ ರಾವ್
ವಿಭಾಗ: 1 ಸೆಮ್ ಬಿಕಾಂ "ಬಿ"
ಶಿಕ್ಷಕರ ಹೆಸರು : ಸತೀಶ್ ಎ ಪಿ


Reg.no. 21DJEC1116



# ಕನ್ನಡ ನಾಡು



**ಕರ್ನಾಟಕ** ಎಂಬ ಹೆಸರಿಗೆ ಅನೇಕ ವ್ಯುತ್ಪತ್ತಿಗಳು ಪ್ರತಿಪಾದಿಸಲ್ಪಟ್ಟಿವೆ. ಎಲ್ಲಕ್ಕಿಂತ ಹೆಚ್ಚಾಗಿ ಒಪ್ಪಲ್ಪಟ್ಟಿರುವ ವ್ಯುತ್ಪತ್ತಿ ಎಂದರೆ ಕರ್ನಾಟಕ ಎಂಬುದು "ಕರು+ನಾಡು" ಎಂಬುದರಿಂದ ವ್ಯುತ್ಪತ್ತಿಯನ್ನು ಪಡೆದಿದೆ. **ಕರು ನಾಡು** ಎಂದರೆ ಕಪ್ಪು ಮಣ್ಣಿನ ನಾಡು, "ಎತ್ತರದ ಪ್ರದೇಶ" ಎಂದು ಅರ್ಥ. ಕರ್ನಾಟಕ ರಾಜ್ಯದ ಸಮುದ್ರ ಮಟ್ಟದಿಂದ ಸರಾಸರಿ ಎತ್ತರ ೧೫೦೦ ಅಡಿ ಇದ್ದು ಇದು ಭಾರತದಲ್ಲಿ ಅತಿ ಹೆಚ್ಚಿನ ಸರಾಸರಿ ಎತ್ತರವುಳ್ಳ ರಾಜ್ಯಗಳಲ್ಲಿ ಒಂದು.[೭] ಸಮುದ್ರದಿಂದ, ವಾಯವ್ಯದಲ್ಲಿ ಗೋವದಿಂದ, ಉತ್ತರದಲ್ಲಿ ಮಹಾರಾಷ್ಟ್ರದಿಂದ, ಪೂರ್ವದಲ್ಲಿ ತೆಲಂಗಾಣ ಮತ್ತು ಆಂಧ್ರ ಪ್ರದೇಶದಿಂದ, ಆಗ್ನೇಯದಲ್ಲಿ ತಮಿಳುನಾಡಿ ನಿಂದ, ನೈಋತ್ಯದಲ್ಲಿ ಕೇರಳದಿಂದ ಸುತ್ತುವರಿಯಲ್ಪಟ್ಟಿದೆ. ೨೦೦೧ ರ ಜನಗಣತಿಯಂತೆ, ೫ ಕೋಟಿಗೂ ಹೆಚ್ಚು ಜನಸಂಖ್ಯೆ ಇರುವ ... ಳಲ್ಲಿ ... ಒಂದು









ನಮ್ಮ ನಾಡು . ಸಂಸ್ಕೃತಿಯ ನೆಲೆವೀಡು. ಇದು ಸಾಧಕರ ಕರ್ಮಭೂಮಿ. ನಾಡು - ನುಡಿ - ಸಂಸ್ಕೃತಿಗಳಿಗಾಗಿ ಸರ್ವಸ್ವದೊಂದಿಗೆ ಜೀವವನ್ನೂ ತೆತ್ತವರ ಮಣ್ಣಿದು. ಶತಮಾನಗಳ ಹಿಂದೆ ಮದರಾಸು ಸರಕಾರದ ವ್ಯಾಪ್ತಿಯಲ್ಲಿದ್ದುದರಿಂದ ಅಲ್ಲಿನ ಪ್ರಭಾವ, ನಂತರ ಕರ್ನಾಟಕದ ಪ್ರೇರಣೆ, ಅಲ್ಲಿಂದ ನಂತರ ಕೇರಳಕ್ಕೆ ಸೇರಿಕೊಂಡ ಬಳಿಕ ಮಲೆಯಾಳಂ ಮನೆ-ಮನಗಳ ಆವರಣ. ಹೀಗೆ ಭೌಗೋಳಿಕವಾಗಿ ಇಲ್ಲಿನ ಸಾಂಸ್ಕೃತಿಕ ಶ್ರೀಮಂತಿಕೆಗೆ - ಕಲಾವಂತಿಕೆಗೆ ಹಲವು ಮಜಲುಗಳು - ಕವಲುಗಳು. ಸುಸಂಸ್ಕೃತವಾದುದು, ಆರೋಗ್ಯಪೂರ್ಣವಾದುದು, ಸಕಾರಾತ್ಮಕವಾದುದು ಎಲ್ಲಿಂದ ಲಭಿಸಿದರೂ ನಮಗದು ಸ್ವೀಕೃತ. ಈ ಎಲ್ಲ ಅಂಶಗಳನ್ನು ಒಂದೇ ಕಡೆ ನೀಡುವ ನಮ್ಮ ಕನ್ನಡ ನಾಡು ಯತ್ನವಿದು.ಸೀಮಿತತೆಯ ನಡುವೆಯೂ ಸಂಸ್ಕೃತಿ-ಕಲೆಗಳ ಸುಗಂಧವನ್ನು ಬೀರುವ ವರಕರ್ಪೂರ ಕವಳದ ತಟ್ಟೆಯಿದು. ನೀವೂ ಮೆಚ್ಚಿಕೊಂಡ ಕಲಾ-ಸಾಂಸ್ಕೃತಿಕ ವಿಚಾರಗಳ ಕುರಿತು ಈ ಪುಟದಲ್ಲಿ ಬರೆಯಬಹುದು. ಸುಂದರ ಫೋಟೋಗಳಿದ್ದರೆ ಚಂದದ ಬರಹಗಳಿಗೊಂದು ಬಂಗಾರದ ಆವರಣವಾದೀತು. ಹಾಗಾಗಿಯೇ ಚಂದದ ನುಡಿ, ಅಂದದ ಅಡಿ, ಇದು ನಮ್ಮ ಕನ್ನಡ ನಾಡು





ಬೇಲೂರು-ಹಳೆಬೀಡು, ಬದಾಮಿ-ಪಟ್ಟದಕಲ್ಲು, ಐಹೊಳೆ ಹಂಪಿ ಮುಂತಾದ ಸ್ಥಳಗಳು ನಮ್ಮ ಭವ್ಯ ಇತಿಹಾಸ ಮತ್ತು ಪರಂಪರೆಗೆ ಸಾಕ್ಷಿಯಾಗಿವೆ. ಪ್ರಾಚೀನ ಕಾಲದಿಂದಲೂ ನಮ್ಮ ನಾಡು ಧರ್ಮ, ಸಾಹಿತ್ಯ, ಸಂಗೀತ, ನೃತ್ಯ, ಕಲೆ, ಕ್ರೀಡೆ, ಶಿಲ್ಪ ಮತ್ತು ವಾಸ್ತು ಶಿಲ್ಪಗಳಿಗೆ ಹೆಸರಾದುದು
ಪಂಪ-ರನ್ನರು, ಬಸವಾದಿ ಶರಣರು, ದಾಸಶ್ರೇಷ್ಠರು, ಹರಿಹರ, ರಾಘವಾಂಕ, ಕುಮಾರವ್ಯಾಸಾದಿ ಪ್ರಾಚೀನ ಕವಿಗಳು, ರಸ ಋಷಿಗಳು ಹಾಗು ಕುವೆಂಪು, ಬೇಂದ್ರೆ, ಕಣವಿ, ಶಿವರುದ್ರಪ್ಪನವರಂತಹ ಆಧುನಿಕ ಕವಿ ಸಾಹಿತಿಗಳು ಕನ್ನಡವನ್ನು ಸಮೃದ್ಧಗೊಳಿಸಿದ್ದಾರೆ



**ಮೂರು ಭೌಗೋಳಿಕ ಪ್ರದೇಶಗಳು**



- ಕರಾವಳಿ ಕರ್ನಾಟಕ – ಪಶ್ಚಿಮ ಘಟ್ಟಗಳು ಮತ್ತು ಅರಬ್ಬೀ ಸಮುದ್ರದ ನಡುವೆ ಇರುವ ತಗ್ಗಿನ ಪ್ರದೇಶ, ಸಾಕಷ್ಟು ಮಳೆ ಪಡೆಯುತ್ತದೆ.
- ಮಲೆನಾಡು – ಪಶ್ಚಿಮ ಘಟ್ಟಗಳು, ಅರಬ್ಬೀ ಸಮುದ್ರದ ತೀರದೊಂದಿಗೆ ಸಾಗುವ ಪರ್ವತ ಸರಣಿ, ಸರಾಸರಿ ಸಮುದ್ರ ಮಟ್ಟದಿಂದ ೯೦೦ ಮೀ. ಎತ್ತರದಲ್ಲಿದೆ. ಇಲ್ಲೂ ಸಹ ಸಾಕಷ್ಟು ಮಳೆ ಆಗುತ್ತದೆ.




ಬಯಲುಸೀಮೆ – ದಖ್ಖನ್ ಪ್ರಸ್ಥಭೂಮಿ (ಅಥವಾ ದಕ್ಷಿಣ ಪ್ರಸ್ಥಭೂಮಿ), ರಾಜ್ಯದ ಒಳನಾಡು, ಮಳೆ ಕಡಿಮೆ ಇರುವ ಪ್ರದೇಶ

# ಕನ್ನಡ ಸಾಹಿತ್ಯ

ಕನ್ನಡ ಸಾಹಿತ್ಯ/ವ್ಯಾಕರಣ ನಿಮ್ಮ ಅಭಿಪ್ರಾಯ ತಿಳಿಸಿ 37,151 ವೀಕ್ಷಕರು
ಭಾರತದ ಕರ್ನಾಟಕ ರಾಜ್ಯದಲ್ಲಿ ಉಪಯೋಗಿಸಲ್ಪಡುವ ಕನ್ನಡ ಭಾಷೆಯ ಸಾಹಿತ್ಯ. ಕನ್ನಡ ಭಾಷೆ ದ್ರಾವಿಡ ಭಾಷಾ ಬಳಗಕ್ಕೆ ಸೇರುತ್ತದೆ.
ಆಧುನಿಕ ಭಾರತದಲ್ಲಿ ಪ್ರಚಲಿತವಾಗಿರುವ ಭಾಷೆಗಳಲ್ಲಿ ಎರಡನೇ ಅತಿ ಹಳೆಯ ಭಾಷೆಯೂ ಹೌದು (ತಮಿಳಿನ ನಂತರ). ಕನ್ನಡ ಸಾಹಿತ್ಯ ಭಾರತದಲ್ಲಿ ಮೂರನೇ ಅತಿ ಹಳೆಯ ಸಾಹಿತ್ಯಕ ಸಂಪ್ರದಾಯ, ಸಂಸ್ಕೃತ ಸಾಹಿತ್ಯ (ಮತ್ತು ಅದರ ಉಪಭಾಷೆಗಳಾದ ಪ್ರಾಕೃತ ಇತ್ಯಾದಿ) ಹಾಗೂ ತಮಿಳು ಸಾಹಿತ್ಯದ ನಂತರ.
ಕನ್ನಡ ಬರವಣಿಗೆಯ ಪ್ರಪ್ರಥಮ ಉದಾಹರಣೆ ದೊರಕಿರುವುದು ಹಲ್ಮಿಡಿ ಶಾಸನ ದಲ್ಲಿ (ಸು. ಕ್ರಿ.ಶ. ೪೫೦). ಪ್ರಸಿದ್ಧವಾದ ಬಾದಾಮಿ ಶಾಸನಗಳು ಪುರಾತನ ಕನ್ನಡ ಬರವಣಿಗೆಯ ಮತ್ತಷ್ಟು ಉದಾಹರಣೆಗಳನ್ನು ನೀಡುತ್ತವೆ. ಉಪಲಬ್ಧವಾಗಿರುವ ಪ್ರಥಮ ಕನ್ನಡ ಪುಸ್ತಕವೆಂದರೆ ೯ ನೇ ಶತಮಾನದ ಅಮೋಘವರ್ಷ ನೃಪತುಂಗನ ಕವಿರಾಜಮಾರ್ಗ. ಈ ಪುಸ್ತಕ ಕನ್ನಡ ಕಾವ್ಯ, ಕನ್ನಡ ನಾಡು, ಮತ್ತು ಕನ್ನಡಿಗರ ಬಗ್ಗೆ ಬರೆಯಲ್ಪಟ್ಟ ಒಟ್ಟಾರೆ ಸಾರಾಂಶವೆನ್ನಬಹುದು. ಇದಕ್ಕೆ ಹಿಂದೆ ಬರೆಯಲ್ಪಟ್ಟ ಕೆಲವು ಕನ್ನಡ ಪುಸ್ತಕಗಳ ಉಲ್ಲೇಖ ಈ ಪುಸ್ತಕದಲ್ಲಿ ಬಂದಿರುವ ಆಧಾರದ ಮೇಲೆ ಕನ್ನಡ ಸಾಹಿತ್ಯದ ಉಗಮ ಸುಮಾರು ಕ್ರಿ.ಶ. ೬-೭ನೇ ಶತಮಾನಗಳಲ್ಲಿ ಆದದ್ದಿರಬಹುದು. ಆದರೆ ಕವಿರಾಜಮಾರ್ಗದ ಹಿಂದಿನ ಯಾವ ಕೃತಿಗಳೂ ಇದುವರೆಗೆ ದೊರಕಿಲ್ಲ.
ಕನ್ನಡ ಸಾಹಿತ್ಯದ ಚರಿತ್ರೆಯನ್ನು ಮೂರು ಘಟ್ಟಗಳಾಗಿ ವಿಂಗಡಿಸಬಹುದು: ಹಳೆಗನ್ನಡ, ನಡುಗನ್ನಡ ಹಾಗೂ ಆಧುನಿಕ ಕನ್ನಡ.

# ಹಳೆಗನ್ನಡ

ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಹತ್ತನೇ
ಶತಮಾನದಿಂದ ಸುಮಾರು ಹನ್ನೆರಡನೇ
ಶತಮಾನದ ವರೆಗಿನ
ಕಾಲಘಟ್ಟವನ್ನು ಹಳೆಗನ್ನಡ ಎಂದು
ಗುರುತಿಸಬಹುದು. ಈ ಕಾಲದ ಸಾಹಿತ್ಯ ಮುಖ್ಯವಾಗಿ
ಜೈನ ಧರ್ಮವನ್ನು ಅವಲಂಬಿಸಿದೆ. ಕನ್ನಡ
ಚರಿತ್ರೆಯ ಈ ಘಟ್ಟಕ್ಕೆ ಆದಿ-ಕಾವ್ಯ ಎಂದೂ
ಸಹ ಕರೆಯಬಹುದು. ಈ ಕಾಲದ ಅತಿ ಪ್ರಸಿದ್ಧ
ಕವಿಯೆಂದರೆ ಪಂಪ (ಕ್ರಿ.ಶ. ೯೦೨-೯೭೫). ಪಂಪನ
ವಿಕ್ರಮಾರ್ಜುನ ವಿಜಯ ಅಥವಾ ಪಂಪ
ಭಾರತ ಇಂದಿಗೂ ಮೇರು ಕೃತಿಯೆಂದು
ಪರಿಗಣಿತವಾಗಿದೆ. ಪಂಪ ಭಾರತ ಮತ್ತು ತನ್ನ
ಇನ್ನೊಂದು ಮುಖ್ಯಕೃತಿಯಾದ ಆದಿಪುರಾಣದ
ಮೂಲಕ
ಪಂಪ ಕನ್ನಡ ಕಾವ್ಯಪರಂಪರೆಯ ದಿಗ್ಗಜರಲ್ಲಿ
ಒಬ್ಬನಾಗಿದ್ದಾನೆ. ಪಂಪ ಭಾರತ ಸಂಸ್ಕೃತ
ಮಹಾಭಾರತದ ಕನ್ನಡ ರೂಪಾಂತರ. ತನ್ನ
ಮಾನವತಾವಾದ ಹಾಗೂ ಗಂಭೀರ ಲೇಖನಶೈಲಿಯ
ಮೂಲಕ ಕನ್ನಡದ ಅತ್ಯಂತ ಪ್ರಭಾವಶಾಲಿ
ಲೇಖಕರಲ್ಲಿ ಒಬ್ಬನಾಗಿದ್ದಾನೆ.
ಇದೇ ಕಾಲದ ಇನ್ನೊಬ್ಬ ಪ್ರಮುಖ
ಲೇಖಕನೆಂದರೆ ಶಾಂತಿನಾಥ ಪುರಾಣವನ್ನು ರಚಿಸಿದ
ಪೊನ್ನ (೯೩೯-೯೬೬).



# ನಡುಗನ್ನಡ

ನಡುಗನ್ನಡ ಸಾಹಿತ್ಯದಲ್ಲಿ ಅನೇಕ ಹೊಸ ಸಾಹಿತ್ಯ ಪ್ರಕಾರಗಳು ಬೆಳಕಿಗೆ ಬಂದವು. ಇವುಗಳಲ್ಲಿ ಮುಖ್ಯವಾದವು ರಗಳೆ, ಸಾಂಗತ್ಯ ಮತ್ತು ದೇಸಿ. ಈ ಕಾಲದ ಸಾಹಿತ್ಯ ಜೈನ, ಹಿಂದೂ ಹಾಗೂ ಜಾತ್ಯತೀತ ಬೋಧನೆಗಳ ಮೇಲೆ ಆಧಾರಿತವಾಗಿದೆ. ಈ ಘಟ್ಟದ ಪ್ರಮುಖ ಲೇಖಕರಲ್ಲಿ ಇಬ್ಬರೆಂದರೆ ಹರಿಹರ ಮತ್ತು ರಾಘವಾಂಕ. ಇಬ್ಬರೂ ತಮ್ಮದೇ ಶೈಲಿಯಲ್ಲಿ ಕನ್ನಡ ಸಾಹಿತ್ಯದ ದಾರಿಯನ್ನು ಬೆಳಗಿದವರು. ಹರಿಹರ ರಗಳೆ ಸಾಹಿತ್ಯವನ್ನು ಬಳಕೆಗೆ ತಂದನು, ತನ್ನ ಶೈವ ಮತ್ತು ವೀರಶೈವ ಕೃತಿಗಳ ಮೂಲಕ. ರಾಘವಾಂಕ ತನ್ನ ಆರು ಕೃತಿಗಳ ಮೂಲಕ ಷಟ್‌ಪದಿ ಛಂದಸ್ಸನ್ನು ಜನಪ್ರಿಯಗೊಳಿಸಿದನು. ಅವನ ಮುಖ್ಯ ಕೃತಿ ಹರಿಶ್ಚಂದ್ರ ಕಾವ್ಯ, ಪೌರಾಣಿಕ ಪಾತ್ರವಾದ ಹರಿಶ್ಚಂದ್ರನ ಜೀವನವನ್ನು ಕುರಿತದ್ದು. ಈ ಕೃತಿ ಸಹ ತನ್ನ ತೀವ್ರವಾದ ಮಾನವತಾವಾದಕ್ಕೆ ಪ್ರಸಿದ್ಧವಾಗಿದೆ. ಇದೇ ಕಾಲದ ಇನ್ನೊಬ್ಬ ಪ್ರಸಿದ್ಧ ಜೈನ ಕವಿ ಜನ್ನ. ತನ್ನ ಕೃತಿಗಳಾದ ಯಶೋಧರ ಚರಿತೆ ಮತ್ತು ಅನಂಥನಾಥ ಪುರಾಣಗಳ ಮೂಲಕ ಜೈನ ಸಂಪ್ರದಾಯದ ಬಗ್ಗೆ ಬರೆದನು. ಇದೇ ಕಾಲದ ಕನ್ನಡ ವ್ಯಾಕರಣದ ಬಗೆಗಿನ ಮುಖ್ಯ ಕೃತಿ ಕೇಶಿರಾಜನ ಶಬ್ದ ಮಣಿ ದರ್ಪಣ.

# ವಚನ ಸಾಹಿತ್ಯ

ವಚನಗಳು ಎಂದು ಸಾಮಾನ್ಯವಾಗಿ ಕರೆಯಲಾಗುವ ವೀರಶೈವ ಶರಣರ ವಚನಗಳು ಮುಕ್ತ ಛಂದಸ್ಸಿನಲ್ಲಿವೆ. ಬಸವೇಶ್ವರ, ಅಕ್ಕಮಹಾದೇವಿ ಮೊದಲಾದವರ ವಚನಗಳನ್ನು ಶಾಸ್ತ್ರೀಯ ಸಂಗೀತದಲ್ಲಿ ಅಳವಡಿಸಿ ಮಲ್ಲಿಕಾರ್ಜುನ ಮನಸೂರ ಮೊದಲಾದ ಹಿಂದುಸ್ತಾನಿ ಸಂಗೀತ ಕಾರರು
ಹಾಡಿದ್ದಾರೆ. ಶರಣರ ನಂತರದ ಕವಿಯಾದ ಸರ್ವಜ್ಞರ ವಚನಗಳು ಮಾತ್ರ ತ್ರಿಪದಿಯಲ್ಲಿವೆ. ವಚನಗಳು ಅಂದಿನ ಕಾಲದ ಸಾಮಾಜಿಕ, ಧಾರ್ಮಿಕ ಮತ್ತು ಆರ್ಥಿಕ ಪರಿಸ್ಥಿತಿಗಳ ಬಗೆಗಿನ ಯೋಚನಾಧಾರೆಗಳು. ಇನ್ನೂ ಮುಖ್ಯವಾಗಿ, ವಚನ ಸಾಹಿತ್ಯ ಅಂದಿನ ಸಾಮಾಜಿಕ ಕ್ರಾಂತಿಯ ಪ್ರಕ್ರಿಯೆಗೆ ಕನ್ನಡಿ ಹಿಡಿಯುತ್ತದೆ. ಬಸವಣ್ಣನವರಿಂದ ಆರಂಭವಾದ ಈ ಕ್ರಾಂತಿ ಜಾತಿ, ಮತ, ಧರ್ಮಗಳ ಯೋಚನೆಗಳ ಕ್ರಾಂತಿಕಾರಿ ಮರು-ಪರಿಶೀಲನೆಗೆ ದಾರಿ ಮಾಡಿಕೊಟ್ಟಿತು. ವಚನ ಸಾಹಿತ್ಯದಿಂದ ಬಂದ ಮುಖ್ಯ ಬೋಧನೆಗಳೆಂದರೆ ಕಾಯಕವೇ ಕೈಲಾಸ ಮತ್ತು ಅಧ್ಯಾತ್ಮಿಕತೆಯ ಬಗ್ಗೆ ಹೊಸ
ನೋಟ.
ವಚನ ಸಾಹಿತ್ಯದ ಪ್ರಮುಖ ಹರಿಕಾರರೆಂದರೆ ಬಸವೇಶ್ವರ (೧೧೩೪-೧೧೯೬), ಅಲ್ಲಮಪ್ರಭು ಮತ್ತು ಕನ್ನಡದ ಮೊದಲ ಮಹಿಳಾ ಲೇಖಕಿಯಾದ ಅಕ್ಕ ಮಹಾದೇವಿ (೧೨ನೇ ಶತಮಾನ).











**ದಾಸ ಸಾಹಿತ್ಯ**

ದಾಸ ಸಾಹಿತ್ಯ (ಭಕ್ತಿ ಸಾಹಿತ್ಯ) ೧೫ನೇ ಶತಮಾನದಲ್ಲಿ ಆರಂಭಗೊಂಡ ಭಕ್ತಿ ಪಂಥದ ಹರಿದಾಸರಿಂದ ವಿರಚಿತವಾದದ್ದು. ಈ ಪದ್ಯಗಳಿಗೆ ಸಾಮಾನ್ಯವಾಗಿ 'ಪದ' ಗಳೆಂದು ಹೆಸರು. ಇವು ಭಗವಂತನಲ್ಲಿ ಒಂದಾಗ ಬಯಸುವ ಭಕ್ತನ ಭಾವವನ್ನು ಪ್ರತಿಬಿಂಬಿಸುತ್ತವೆ. ಈ ಸಾಹಿತ್ಯ ಸಂಗೀತದೊಂದಿಗೂ ನಿಲುಕಿದೆ. ದಾಸ ಸಾಹಿತ್ಯ ಭಾರತದ ಶಾಸ್ತ್ರೀಯ ಸಂಗೀತ ಪದ್ಧತಿಗಳಲ್ಲೊಂದಾದ ಕರ್ನಾಟಕ ಸಂಗೀತಕ್ಕೆ ಬುನಾದಿಯಾಗಿದೆ.

ದಾಸರ ಪದಗಳಿಗೆ ದೇವರನಾಮಗಳೆಂದೂ ಹೆಸರು. ಈ ಪ್ರಕಾರದ ಮುಖ್ಯ ಕನ್ನಡ ಕವಿಗಳೆಂದರೆ ಪುರಂದರದಾಸ (೧೪೯೪-೧೫೬೪) ಮತ್ತು ಕನಕದಾಸ. ಇವರನ್ನು ದಾಸ ಸಾಹಿತ್ಯದ ಅಶ್ವಿನಿದೇವತೆಗಳೆಂದು ಕರೆಯಲಾಗಿದೆ.

•ಸಂಗೀತ: ದಕ್ಷಿಣ ಭಾರತದ ಶಾಸ್ತ್ರೀಯ ಸಂಗೀತ ಪದ್ಧತಿಯಾದ ಕರ್ನಾಟಕ ಸಂಗೀತ ಉಗಮವಾದದ್ದು ಕರ್ನಾಟಕದಲ್ಲಿಯೇ. ಕರ್ನಾಟಕದಲ್ಲಿ ಜನಪ್ರಿಯವಾಗಿರುವ ಇತರ ಸಂಗೀತ ರೂಪಗಳಲ್ಲಿ ಭಾವಗೀತೆಗಳು, ಸುಗಮ ಸಂಗೀತ, ಚಿತ್ರಗೀತೆಗಳು ಸೇರಿವೆ.



•ನೃತ್ಯ: ಭಾರತದ ಶಾಸ್ತ್ರೀಯ ನೃತ್ಯ ಪದ್ಧತಿಗಳಲ್ಲಿ ಹೆಸರಾದ ಭರತನಾಟ್ಯ ಕರ್ನಾಟಕದಲ್ಲಿ ಜನಪ್ರಿಯ. ಕರ್ನಾಟಕಕ್ಕೆ ವಿಶಿಷ್ಟವಾದ ಒಂದು ನೃತ್ಯಕಲೆ ಯಕ್ಷಗಾನ. ಡೊಳ್ಳು ಕುಣಿತ ಜಾನಪದ ನೃತ್ಯ ಪದ್ಧತಿಗಳಲ್ಲಿ ಒಂದು.

•ಸಂಸ್ಕೃತಿಯ ಕೇಂದ್ರವಾದ ಕರ್ನಾಟಕ, ಮೈಸೂರು, ಹಳೇಬೀಡು, ಬೇಲೂರು ಮುಂತಾದ

**ಕಲೆ**



ಬಿದರಿ ಕಲೆ ಸುಮಾರು ೧೪ನೆ ಶತಮಾನ್ ದಲ್ಲಿ ಬೀದರ್ ಜಿಲ್ಲೆಯಲ್ಲಿ ಜನಿಸಿದ ಪ್ರಾಚಿನ ಕಲೆ ಯಲ್ಲಿ ಒಂದು. ಇವತ್ತಿಗೂ ಈ ಕಲೆಯ ಬೇಡಿಕೆ ದೇಶ-ವಿದೇಶದಲ್ಲಿ ತುಂಬಾ ಇದೆ. ಇತ್ತೀಚಿನ ಕಾಮ್ಮೊನ್ ವೆಲ್ಲ್ತ್ ಗೇಮ್ಸ್ ನ ಅತಿ ಪ್ರಮುಖ ಗಣ್ಯರಿಗೆ ಭಾರತ ದೇಶದಿಂದ ಬಿದರಿ ಕಲೆ ಉಡುಗೊರೆ ಕೊಡಲಾಗಿತ್ತು. ಮತ್ತೆ ಬಿದರಿ ಕಲೆಯ ಊಡುಗೋರೆ ಊ ಎಸ್ ನ ವೈಟ್ ಹೌಸ್ನಲ್ಲಿ ಕೂಡ ಇಡಲಾಗಿದೆ. ಇವು ಬಿದರಿ ಕಲೆಯ ಕೆಲವು ಉಪಾದಿಗಳು.ಇತ್ತೀಚೆಗೆ ಬಿದರಿಕಲೆಗೆ ಹೊಸ ಆಯಾಮಗಳನ್ನು ನೀಡಲಾಗಿದೆ. ಬುದ್ದನ ರೂಪ ವನ್ನು ಹಿಂದಿ ಗಿಂತಲೂ ವಿಭಿನ್ನವಾಗಿ ಗ್ರಹಿಸಿದ ಶಿಲ್ಪಗಳು ಸಮಕಾಲೀನ ಕುಶಲಿಗಳಿಂದ ಮೂಡಿ ಬಂದಿವೆ. ಕನ್ನಡ ಸಂಸ್ಕೃತಿಯಲ್ಲಿ ಜಾನಪದ ನೃತ್ಯ, ಹಾಡು, ನಾಟಕ, ಕಲೆ, ವೇಷಭೂಷಣಗಳು ಆಚರಣೆಗಳು, ಆಡಂಬರಗಳು ಕನ್ನಡದ ಸಂಸ್ಕೃತಿಯನ್ನು ಹೆಚ್ಚಿಸುತ್ತದೆ











**ಯಕ್ಷಗಾನ** - ನೃತ್ಯ, ಹಾಡುಗಾರಿಕೆ, ಮಾತುಗಾರಿಕೆ, ವೇಷ-ಭೂಷಣಗಳನ್ನೊಳಗೊಂಡ ಒಂದು ಸ್ವತಂತ್ರವಾದ ಶಾಸ್ತ್ರೀಯ ಕಲೆ. ಕರ್ನಾಟಕದ ಸಾಂಪ್ರದಾಯಿಕ ಕಲಾ ಪ್ರಕಾರಗಳಲ್ಲಿ ಅತ್ಯಂತ ಪ್ರಮುಖವಾದದ್ದು. ಕರ್ನಾಟಕದ ಕರಾವಳಿ ಜಿಲ್ಲೆಗಳು (ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ), ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೇರಳದ ಕಾಸರಗೋಡು ಜಿಲ್ಲೆಗಳಲ್ಲಿ ಯಕ್ಷಗಾನವು ಮನೆ ಮಾತಾಗಿದೆ. ಯಕ್ಷಗಾನದ ಪ್ರಾಚೀನತೆಯ ಬಗ್ಗೆ ಹೆಚ್ಚಿನ ಮಾಹಿತಿ ದೊರಕುವುದಿಲ್ಲವಾದರೂ ಭರತಮುನಿಯ ನಾಟ್ಯಶಾಸ್ತ್ರದಲ್ಲಿ ಅಲ್ಲಲ್ಲಿ ತೋರಿ ಬರುವ ಕೆಲವು ಆಧಾರಗಳಿಂದ ಈ ಕಲೆ ಬಹಳ ಹಿಂದಿನಿಂದಲೂ ಇತ್ತೆಂಬುದು ಸ್ಪಷ್ಟವಾಗುತ್ತದೆ. ಕನ್ನಡದ ಪ್ರಾಚೀನ ಕಾವ್ಯಗಳಲ್ಲಿ ಯಕ್ಷಗಾನ ಎಂಬ ಹೆಸರಿನ ಉಲ್ಲೇಖ ಕಂಡುಬರುತ್ತದೆ. ಕರ್ನಾಟಕದಲ್ಲು ಸುಮಾರು 12ನೆಯ ಶತಮಾನದಲ್ಲಿ ಒಂದು ಗಾನ ಸಂಪ್ರದಾಯ ಯಕ್ಷಗಾನ ಎಂಬ ಹೆಸರಿನಿಂದ ಬಳಕೆಯಲ್ಲಿತ್ತು. ಮುಂದೆ ಅದು ನಾಟಕ ರೂಪದಲ್ಲಿ ಪರಿವರ್ತನೆಗೊಂಡಾಗ ಬಯಲಾಟ, ದಶಾವತಾರ ಆಟ, ದೊಡ್ಡಾಟ, ಪಾರಿಜಾತ ಎಂಬ ಹೆಸರುಗಳಿಂದ 15ನೆಯ ಶತಮಾನದ ಹೊತ್ತಿಗೆ ರೂಢಿಗೆ ಬಂದಂತೆ ಕಾಣುತ್ತದೆ. ಈ ಬಯಲಾಟದ ಇನ್ನೊಂದು ರೂಪ ತಾಳಮದ್ದಲೆ ಅಥವಾ ಯಕ್ಷಗಾನ ಕೂಟ. ಇದು 16ನೆಯ ಶತಮಾನದಲ್ಲಿ ರೂಢಿಯಾಗಿದ್ದಂತೆ ತಿಳಿದುಬರುತ್ತದೆ.

**ಧಾರ್ಮಿಕ ಕ್ಷೇತ್ರಗಳು**

ಕರ್ನಾಟಕ: ಕರೆಸಂತೆ ಶ್ರೀ ಮಹಾಲಕ್ಷ್ಮೀ ಲಕ್ಕಮ್ಮ ದೇವಿ ದೇವಸ್ಥಾನ

. ಸಾಗರ, ಗಾಣಗಾಪುರ, ಧರ್ಮಸ್ಥಳ, ಶೃಂಗೇರಿ, ಉಡುಪಿ, ಮೇಲುಕೋಟೆ, ಬಸವಕಲ್ಯಾಣ, ಆದಿಚುಂಚನಗಿರಿ, ಬಾಳೆಹೊನ್ನೂರು, ಹೊರನಾಡು, ಕಟೀಲು, ಗೋಕರ್ಣ, ಸಿದ್ಧಗಂಗಾ ಮಠ, ದ್ಯಾವನುರು, ಕೊಲ್ಲೂರು, ಮುರುಡೇಶ್ವರ, ಶಿರ್ಸಿ, ಕುಕ್ಕೆ ಸುಬ್ರಹ್ಮಣ್ಯ, ಕೂಡಲ ಸಂಗಮ, ಬನವಾಸಿ, ಸವದತ್ತಿ, ಗೋಲಗುಮ್ಮಟ, ಬಾದಾಮಿ, ಗುರಗುಂಜಿ, ಚಾಮುಂಡಿ ಬೆಟ್ಟ, ನಂಜನಗೂಡು, ನಂಬಿನಾಯಕನಹಳ್ಳಿ, ವೈದ್ಯನಾಥೇಶ್ವರ-ವೈದ್ಯನಾಥಪುರ, ಶ್ರೀ ವೈದ್ಯನಾಥೇಶ್ವರ ಸ್ವಾಮಿ, ಅರೆಯೂರು, ತುಮಕೂರು ಉಗ್ರ ನರಸಿಂಹ ಸ್ವಾಮಿ, ಮದ್ದೂರಮ್ಮ-ಮದ್ದೂರು. ಬನಶಂಕರಿ ದೇವಿ – ಬನಶಂಕರಿ,ಝರಣಿ ನೃಸಿಂಹಸ್ವಾಮಿ – ಬೀದರ್, ಗುರುದ್ವಾರ ನಾನಕ್ ಝೀರಾ ಸಾಹಿಬ್ – ಬೀದರ್, ಖಿಳೆಗಾಂವ ಬಸವಣ್ಣ, ಮೂಡಬೂಳ ವೇಣುಗೋಪಾಲ ಸ್ವಾಮಿ ದೇವಾಲಯ, ಗುಲ್ಬರ್ಗಾದ ಕೋಟೆ, ಶರಣಬಸವೇಶ್ವರ ದೇವಾಲಯ, ಬಂದೇನವಾಜ್ ದರ್ಗ, ಬುದ್ಧವಿಹಾರ, ದೇವರಗುಡ್ಡ, ಮೈಲಾರ, ಮಲೆಮಹದೇಶ್ವರ, ನಂಜವದೂತ ಮಠ ಸಿರಾ ಯಲಗೂರು, ಹುಲಿಗಿಯ ಹುಲಿಗೆಮ್ಮ ದೇವಿ. ಇಟಗಿಯ ಭಿಮಕ್ಕನ ಗುಡಿ, ಬೆಂಗಳೂರಿನ ಮೂಡಲಪಾಳ್ಯದ ಭತ್ತಿಲಿಂಗೇಶ್ವವರ ದೇವಾಲಯ ಹಲವು ಧಾರ್ಮಿಕ ಕ್ಷೇತ್ರಗಳಿಂದ ಕೂಡಿದೆ.ಕೆಂಕೆರೆ ಪುರದಮಠದ ಶ್ರೀ ಚನ್ನಬಸವೇಶ್ವರ ದೇವಾಲಯ,







**ಹಳಗನ್ನಡ ಕಾಲದ ಕವಿಗಳು**

- ಸಮಂತ ಭದ್ರ
- ಶಿವಕೋಟ್ಯಾಚಾರ್ಯ
- ಪಂಪ
- ರನ್ನ
- ಪೊನ್ನ
- ಜನ್ನ
- ಪುಲಿಗೆರೆ ಸೋಮನಾಥ
- ಪಲ್ಕುರಿಕಿ ಸೋಮನಾಥ
- ನಯಸೇನ
- ಅಸಗ
- ಗುಣನಂದಿ
- ಕೇಶಿರಾಜ
- ನಾಗವರ್ಮ-೧
- ನಾಗವರ್ಮ-೨

**ನಡುಗನ್ನಡ ಕಾಲದ ಕವಿಗಳು**

- ಹರಿಹರ (ಕವಿ)
- ರಾಘವಾಂಕ
- ಭೀಮಕವಿ
- ಲಕ್ಷ್ಮೀಶ
- ಕುಮಾರವ್ಯಾಸ
- ಜೇಡರ ದಾಸಿಮಯ್ಯ
- ವಾದಿರಾಜರು
- ಪುರಂದರದಾಸ
- ಕನಕದಾಸ
- ಬಸವಣ್ಣ
- ಅಕ್ಕಮಹಾದೇವಿ ಅಲ್ಲಮಪ್ರಭು

**ಹೊಸಗನ್ನಡ ಕಾಲದ ಕವಿಗಳು**


- ಮಧುರ ಚೆನ್ನ
- ಶಾಂತಕವಿ
- ಗೋವಿಂದ ಪೈ
- ಆಲೂರು ವೆಂಕಟರಾಯರು
- ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ(ಕುವೆಂಪು)
- ದ.ರಾ.ಬೇಂದ್ರೆ
- ಮಾಸ್ತಿ
- ಶಿವರಾಮ ಕಾರಂತ
- ವಿ.ಕೃ.ಗೋಕಾಕ್
- ಯು.ಆರ್.ಅನಂತಮೂರ್ತಿ
- ಗಿರೀಶ್ ಕಾರ್ನಾಡ್
- ಚಂದ್ರಶೇಖರ ಕಂಬಾರ










# ಕನ್ನಡ ಜ್ಞಾನಪೀಠ ಪುರಸ್ಕೃತರು



| ಹೆಸರು | ವರ್ಷ | ಕೃತಿ |
|---|---|---|
| ಕುವೆಂಪು | ೧೯೬೭ | ಶ್ರೀ ರಾಮಾಯಣ ದರ್ಶನಂ |
| ದ. ರಾ. ಬೇಂದ್ರೆ | ೧೯೭೩ | ನಾಕುತಂತಿ |
| ಶಿವರಾಮ ಕಾರಂತ | ೧೯೭೭ | ಮೂಕಜ್ಜಿಯ ಕನಸುಗಳು |
| ಮಾಸ್ತಿ ವೆಂಕಟೇಶ ಅಯ್ಯಂಗಾರ್ | ೧೯೮೩ | ಕನ್ನಡ ಸಾಹಿತ್ಯಕ್ಕೆ ಸಮಗ್ರ ಕೊಡುಗೆ. ವಿಶೇಷ ಉಲ್ಲೇಖ:- ಚಿಕವೀರ ರಾಜೇಂದ್ರ (ಗ್ರಂಥ) |
| ವಿ. ಕೃ. ಗೋಕಾಕ | ೧೯೯೦ | ಕನ್ನಡ ಸಾಹಿತ್ಯಕ್ಕೆ ಸಮಗ್ರ ಕೊಡುಗೆ. ವಿಶೇಷ ಉಲ್ಲೇಖ ಭಾರತ ಸಿಂಧುರಶ್ಮಿ |
| ಯು. ಆರ್. ಅನಂತಮೂರ್ತಿ | ೧೯೯೪ | ಸಮಗ್ರ ಸಾಹಿತ್ಯಕ್ಕೆ ಕೊಡುಗೆ |
| ಗಿರೀಶ್ ಕಾರ್ನಾಡ್ | ೧೯೯೮ | ಕನ್ನಡ ಸಾಹಿತ್ಯಕ್ಕೆ ಸಮಗ್ರ ಕೊಡುಗೆ. ನಾಟಕಗಳು |
| ಚಂದ್ರಶೇಖರ ಕಂಬಾರ | ೨೦೧೦ | ಕನ್ನಡ ಸಾಹಿತ್ಯಕ್ಕೆ ಸಮಗ್ರ ಕೊಡುಗೆ |

# ಕ್ರೀಡಾ ಸಾಧಕರು



)ದಿನಾ ಜಾರ್ಜ್ ಎಸ್, ಆಥ್ಲೆಟಿಕ್
2)ಮಿಥುನಾ, ಬ್ಯಾಡ್ಮಿಂಟನ್
3)ಅವಿನಾಶ್ ಮಣಿ, ಈಜು
4)ಅರ್ಜುನ್ ಹಲ್ಕುರ್ಕಿ, ಕುಸ್ತಿ
5)ಅನಿಲ್ ಕುಮಾರ್ ಬಿ.ಕೆ, ಬಾಸ್ಕೆಟ್ ಬಾಲ್
6)ಉಷಾರಾಣಿ ಎನ್, ಕಬ್ಬಡ್ಡಿ
7)ಖುಷಿ ವಿ, ಟೇಬಲ್ ಟೆನ್ನಿಸ್
8)ಎಂ.ಎನ್.ಪೊನ್ನಮ್ಮ ,ಹಾಕಿ
9)ವಿನಾಯಕ್ ರೋಖಡೆ, ವಾಲಿಬಾಲ್
10) ಎಂ.ದೀಪಾ, ರೋಯಿಂಗ್
11)ರಾಜು ಅಡಿವೆಪ್ಪಾ ಭಾಟಿ, ಸೈಕ್ಲಿಂಗ್
12) ವರ್ಷಾ ಎಸ್, ಸ್ನೂಕರ್
13)ತೇಜಸ್ ಕೆ, ಶೂಟಿಂಗ್
14)ಶೇಖರ್ ವೀರಾಸ್ವಾಮಿ, ಟೆನ್ನಿಸ್ (ಪ್ಯಾರಾ)









# ಧನ್ಯವಾದಗಳು